ಸರ್ಕಾರಿ ಆಸ್ಪತ್ರೆಗೆ ವೈದ್ಯರು & ಸಿಬ್ಬಂದಿಯನ್ನು ನೇಮಿಸುವುದು

910 (1027) ಶ್ರೀ ಪುಟ್ಟರಾಜು ಸಿ.ಎಸ್. (ಮೇಲುಕೋಟೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಾಂಡವಪುರ ತಾಲ್ಲೂಕು, ಚಿನಕುರುಳಿ ಗ್ರಾಮದ 30 ಹಾಸಿಗೆಯುಳ್ಳ ಸರ್ಕಾರಿ ಆಸ್ಪತ್ರೆಯ ಕಾಮಗಾರಿ ಪೂರ್ಣಗೊಂಡಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕಟ್ಟಡದ ಕಾಮಗಾರಿ ಮುಗಿದಿದ್ದರೂ ಸಹ ವೈದ್ಯರು ಮತ್ತು ಸಿಬ್ಬಂದಿಗಳನ್ನು ನೇಮಿಸದಿರಲು ಕಾರಣವೇನು; ಮಾಹಿತಿ ನೀಡುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಚಿನಕುರಳಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 30 ಹಾಸಿಗೆಗಳಿಗೆ ಮೇಲ್ದರ್ಜೆಗೆ ಏರಿಸಲಾಗಿದ್ದು, ಅದಕ್ಕೆ ಅನುಗುಣವಾಗಿ ಕಟ್ಟಡ ನಿರ್ಮಾಣ ಕಾರ್ಯವು ಪೂರ್ಣಗೊಂಡಿದೆ. ವೈದ್ಯರು ಮತ್ತು ಸಿಬ್ಬಂದಿ ಮಂಜೂರಾತಿ ಪ್ರಸ್ತಾವನೆ ಸರ್ಕಾರದಲ್ಲಿ ಸ್ವೀಕೃತವಾಗಿದ್ದು ಅದು ಆರ್ಥಿಕ ಇಲಾಖೆಯ ಸಮಾಲೋಚನೆಯೊಂದಿಗೆ ಪರಿಶೀಲನೆಯಲ್ಲಿದೆ.

ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದು

911 (1490) ಶ್ರೀ ರಹೀಮ್ ಖಾನ್ (ಬೀದರ್) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಸಾರ್ವಜನಿಕ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರುಗಳ ಹುದ್ದೆಯನ್ನು ಹಾಗೂ ತಂತ್ರಜ್ಞರ ಹುದ್ದೆಯನ್ನು ಭರ್ತಿ ಮಾಡಿಕೊಳ್ಳದೇ ರೋಗಿಗಳಿಗೆ ಚಿಕಿತ್ಸೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;